# ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
# ಹಾಗೂ ವಿಶೇಷ ನ್ಯಾಯಾಲಯ, ಹಾವೇರಿ
## ಸ್ಪೆಷಲ್ ಎಸ್.ಸಿ./ಎಸ್.ಟಿ.33/2019

PW-07

CW-09

| | |
|---|---|
| ಸಾಕ್ಷಿದಾರರ ಹೆಸರುಃ | ಸಂತೋಷ ಆಲದಕಟ್ಟಿ |
| ತಂದೆಃಗಂಡನ ಹೆಸರುಃ | ಯಲ್ಲಪ್ಪ |
| ವಯಸ್ಸುಃ | 33 ವರ್ಷ |
| ಉದ್ಯೋಗಃ | ವ್ಯವಸಾಯ |
| ವಾಸ ಸ್ಥಳಃ | ಹಾವೇರಿ |

**ದಿನಾಂಕ:15.09.2021 ರಂದು ಸಾಕ್ಷಿ ಹಾಜರಿದ್ದು, ಸಾಕ್ಷಿಗೆ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.**
**ಮುಖ್ಯ ವಿಚಾರಣೆ ವಿಶೇಷ ಸರ್ಕಾರಿ ಅಭಿಯೋಜಕರಿಂದಃ**

ನನಗೆ ಚಾಸಾ-1 ರವರ ಪರಿಚಯವಿದೆ. ಚಾಸಾ-1 ನನ್ನ ಬಳಿ ಬಂದು ದೂರನ್ನು ಬೆರಳಚ್ಚು ಮಾಡಿಸಿಕೊಂಡು ಹೋಗಿರುವುದಿಲ್ಲ ಹಾಗು ಪೊಲೀಸರು ನನ್ನ ಹೇಳಿಕೆ ಪಡೆದಿರುವುದಿಲ್ಲ.

(ಈ ಹಂತದಲ್ಲಿ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಸಾಕ್ಷಿಯ ಪಾಟೀ ಸವಾಲಿಗೆ ಅನುಮತಿ ನೀಡಲಾಗಿದೆ)

**ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ**

ದಿನಾಂಕಃ07.06.2019 ರಂದು ಪೊಲೀಸರು ನನ್ನ ಹೇಳಿಕೆ ಪಡೆದಿದ್ದು ಸದರಿ ಹೇಳಿಕೆಯಲ್ಲಿ ದಿನಾಂಕಃ04.06.2019 ರಂದು ದನಗಳನ್ನು ಸಂಜೆ 7.00 ಗಂಟೆಗೆ ಹಾವೇರಿಯಲ್ಲಿ ಸಾಗಣೆಮಾಡುತ್ತಿದ್ದಾಗ ಮುಸ್ಲಿಂ ಜನಾಂಗದವರು ಚಾಸಾ-1 ಮತ್ತು ಇತರರಿಗೆ ಹಲ್ಲೆ ಮಾಡಿದ್ದು ಕಾರಣ ಅವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಅಲ್ಲಿಗೆ ನಾನು ಹೋದಾಗ ಹಲ್ಲೆ ಮಾಡಿದವರ ವಿರುದ್ಧ ದೂರು ದಾಖಲಿಸಬೇಕು ಎಂದು ಹೇಳಿದ ಮೇರೆಗೆ ನಿಪಿ-1 ರಂತೆ ದೂರನ್ನು ಬೆರಳಚ್ಚು ಮಾಡಿಕೊಟ್ಟೆ ಎಂದು ಸೂಚಿಸುವುದು ಸರಿಯಲ್ಲ. ಸಾಕ್ಷಿ ಹೇಳಿಕೆಯನ್ನು ನಿಪಿ-15 ಕ್ಕೆ ಗುರ್ತಿಸಲಾಯ್ತು. ನಿಪಿ-15 ರಂತೆ ಹೇಳಿಕೆ ನೀಡಿದ್ದರೂ ಸಹ ಆರೋಪಿತರಿಗೆ ಸಹಾಯಮಾಡಲು ಸುಳ್ಳು ಸಾಕ್ಷಿ ಹೇಳಿದ್ದೇನೆಂದು ಸೂಚಿಸುವುದು ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರವಾಗಿ ಶ್ರೀ ಎಂ.ಎಂ.ಸಿ ವಕೀಲರಿಂದಃ**

ಶ್ರೀ ಎಂ.ಎಂ.ಸಿ ವಕೀಲರು ಪಾಟೀ ಸವಾಲು ಇಲ್ಲ ಎನ್ನುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇಲೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

(ಈ. ರಾಜೀವ ಗೌಡ)
ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ
ನ್ಯಾಯಾಧೀಶರು ಮತ್ತು ವಿಶೇಷ ನ್ಯಾಯಾಧೀಶರು ಹಾವೇರಿ.